**SEPTEMBER 25, 2025**
**ALL INDIA RADIO- DHARWAD**
**PRADESH SAMACHARA (KANNADA) 7:05 AM**

ಮುಖ್ಯಾಂಶಗಳು

- ಆಧುನಿಕ ಕನ್ನಡ ಸಾಹಿತ್ಯ ಲೋಕದ ಜನಪ್ರಿಯ ಕಾದಂಬರಿಕಾರ ಡಾ.ಎಸ್.ಎಲ್ ಭೈರಪ್ಪ ನಿಧನ: ಗಣ್ಯರಿಂದ ಕಂಬನಿ.

- ರವೀಂದ್ರ ಕಲಾಕ್ಷೇತ್ರ ಆವರಣದಲ್ಲಿ ಇಂದು ಅಂತಿಮ ದರ್ಶನಕ್ಕೆ ಅವಕಾಶ: ಸಕಲ ಸರ್ಕಾರಿ ಗೌರವಗಳೊಂದಿಗೆ ನಾಳೆ ಮೈಸೂರಿನಲ್ಲಿ ಅಂತಿಮ ಸಂಸ್ಕಾರ.

- ಮಂಗಳೂರಿನ ಸಮಗ್ರ ಅಭಿವೃದ್ಧಿಗೆ ರಾಜ್ಯ ಸರ್ಕಾರದಿಂದ ಅಗತ್ಯ ನೆರವು– ಗ್ರಾಮೀಣಾಭಿವೃದ್ಧಿ ಇಲಾಖೆ ಭರವಸೆ.

- ರಾಜ್ಯದಲ್ಲಿ ಮುಂದುವರಿದ ರಾಷ್ಟ್ರೀಯ ಪೋ ‘ಣ್ ಮಾಸಾಚರಣೆ–ಪೌಷ್ಟಿಕ ಆಹಾರ ಕ್ರಮಗಳ ಬಗ್ಗೆ ಜಾಗೃತಿ ಕಾರ್ಯಕ್ರಮಗಳು.

ಈಗ ವಾರ್ತೆಗಳ ವಿವರ

*******

ಆಧುನಿಕ ಕನ್ನಡ ಸಾಹಿತ್ಯ ಲೋಕದ ಅತ್ಯಂತ ಜನಪ್ರಿಯ ಕಾದಂಬರಿಕಾರರು, ಪದ್ಮಶ್ರೀ, ಪದ್ಮವಿಭೂ ‘ಣ, ಸರಸ್ವತಿ ಸಮ್ಮಾನ್ ಪುರಸ್ಕೃತ, ಡಾ.ಎಸ್.ಎಲ್ ಭೈರಪ್ಪ ನಿನ್ನೆ ಮಧ್ಯಾಹ್ನ ಬೆಂಗಳೂರಿನ ಖಾಸಗಿ ಆಸ್ಪತ್ರೆಯಲ್ಲಿ ನಿಧನರಾದರು. ಅವರಿಗೆ 94 ವರ್ಷ ವಯಸ್ಸಾಗಿತ್ತು. ಆವರಣ, ನಾಯಿ ನೆರಳು, ವಂಶವೃಕ್ಷ, ಗೃಹಭಂಗ, ಸಾಕ್ಷಿ, ಅನ್ವೇ ‘ಣೆ, ಭಿತ್ತಿ, ಮಂದ್ರ ಸೇರಿದಂತೆ ಅನೇಕ ಕಾದಂಬರಿಗಳ ಮೂಲಕ ಅಪಾರ ಪ್ರಮಾಣದ ಓದುಗರನ್ನು ಸೃಷ್ಟಿಸಿದ್ದ ಅವರು, ತಮ್ಮ ಸಾಹಿತ್ಯ ಕೃಷಿಯಿಂದ ಸಾಮಾಜಿಕ ಮೌಲ್ಯಗಳನ್ನು ಪ್ರತಿಪಾದಿಸುತ್ತ ಬಂದವರು. ಸಾಹಿತ್ಯ ಲೋಕದ ಪಂಡಿತರು ಮಾತ್ರವಲ್ಲದೇ ಮಧ್ಯಮವರ್ಗದ ಜನರನ್ನು ಕೂಡ ಆಕರ್ಷಿಸುವ ಬರವಣಿಗೆ ಅವರಿಗೆ ಸಿದ್ಧಿಸಿತ್ತು. ನಿರ್ಭೀತ ಮತ್ತು ಕಾಲಾತೀತ ಚಿಂತಕರಾಗಿದ್ದ ಡಾ.ಎಸ್.ಎಲ್.ಭೈರಪ್ಪ ಅವರು, ತಮ್ಮ ಚಿಂತನಶೀಲ ಕೃತಿಗಳಿಂದ ಕನ್ನಡ ಸಾಹಿತ್ಯವನ್ನು ಶ್ರೀಮಂತಗೊಳಿಸಿದ್ದಾರೆ. ಅವರ ಬರಹಗಳು ಪೀಳಿಗೆಗಳನ್ನು ಚಿಂತಿಸಲು, ಪ್ರಶ್ನಿಸಲು ಮತ್ತು ಸಮಾಜದೊಂದಿಗೆ ಹೆಚ್ಚು ಆಳವಾಗಿ ತೊಡಗಿಸಿಕೊಳ್ಳಲು ಪ್ರೇರೇಪಿಸಿದವು ಎಂದು ಪ್ರಧಾನಮಂತ್ರಿ ನರೇಂದ್ರ ಮೋದಿ ಸಾಮಾಜಿಕ ಮಾಧ್ಯಮ ಎಕ್ಸ್‌ನಲ್ಲಿ ಬಣ್ಣಿಸಿ, ಸಂತಾಪ ಸೂಚಿಸಿದ್ದಾರೆ. ಕನ್ನಡ ಸಾರಸ್ವತ ಲೋಕದ ಹಿರಿಯ ಬರಹಗಾರರಾದ ಎಸ್.ಎಲ್.ಭೈರಪ್ಪ ಅವರು ತಮ್ಮ ಆಪ್ತವೆನಿಸುವ ಬರಹ ಶೈಲಿಯಿಂದಾಗಿ ಅಪಾರ ಓದುಗರನ್ನು ಹೊಂದಿದ್ದರು.

ಭೈರಪ್ಪನವರ ನಿಧನದಿಂದ ಸಾಹಿತ್ಯಲೋಕ ಬಡವಾಗಿದೆ. ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಸಂತಾಪ ಸೂಚಿಸಿದ್ದಾರೆ. ರಾಷ್ಟ್ರೀಯತೆಯ ವಿಚಾರಗಳನ್ನು ಬಲಪಡಿಸುವಲ್ಲಿ ಡಾ.ಎಸ್.ಎಲ್.ಭೈರಪ್ಪನವರ ಸಮರ್ಪಣೆ ಎಂದೆಂದಿಗೂ ಶಾಶ್ವತ. ಭಾರತದ ಸಾಹಿತ್ಯ ಲೋಕಕ್ಕೆ ಅವರು ನೀಡಿದ ಕೊಡುಗೆ ಅಪಾರ. ಶ್ರೀಯುತರ ಅಗಲಿಕೆಯಿಂದ ಕರುನಾಡು ಮಾತ್ರವಲ್ಲದೇ ಭಾರತದ ಸಾರಸ್ವತ ಲೋಕಕ್ಕೆ ಬಹು ದೊಡ್ಡ ನ ಷ್ಟವಾಗಿದೆ ಎಂದು ಕೇಂದ್ರ ಸಚಿವ ಪ್ರಲ್ಹಾದ ಜೋಶಿ ಕಂಬನಿ ಮಿಡಿದಿದ್ದಾರೆ. ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವ ಎಚ್.ಕೆ.ಪಾಟೀಲ, ಭೈರಪ್ಪನವರ ನಿಧನಕ್ಕೆ ತೀವ್ರ ಸಂತಾಪ ವ್ಯಕ್ತಪಡಿಸಿ, ಅವರು ಸತ್ಯದ ಪಕ್ಷಪಾತಿ. ಸಮಾಜವನ್ನು ಜಾಗೃತ ಮಾಡುವಲ್ಲಿ ಬಹುದೊಡ್ಡ ಕೊಡುಗೆ ನೀಡಿದವರು ಎಂದು ಬಣ್ಣಿಸಿದರು. **(46)**

ಧ್ವನಿ–ಎಚ್.ಕೆ.ಪಾಟೀಲ–**48** ಸೆಕೆಂಡ್ಸ್

ಶ್ರೇಷ್ಠ ಕಾದಂಬರಿಕಾರ ಎಸ್.ಎಲ್ ಭೈರಪ್ಪ ಅವರ ನಿಧನಕ್ಕೆ ನಾಡಿನ ಅನೇಕ ಗಣ್ಯರು, ಸಂತಾಪ ಸೂಚಿಸಿದ್ದಾರೆ.

*******

ಎಸ್.ಎಲ್.ಭೈರಪ್ಪ ಅವರ ಪಾರ್ಥಿವ ಶರೀರವನ್ನು ಇಂದು ಬೆಳಗ್ಗೆ **8** ಗಂಟೆಯಿಂದ ಬೆಂಗಳೂರಿನ ರವೀಂದ್ರ ಕಲಾ ಕ್ಷೇತ್ರದ ಆವರಣದಲ್ಲಿ ಸಾರ್ವಜನಿಕರ ದರ್ಶನಕ್ಕಾಗಿ ಇರಿಸಲಾಗುವುದು ಎಂದು ಅಧಿಕೃತ ಮೂಲಗಳು ತಿಳಿಸಿವೆ. ಮೃತರ ಅಂತಿಮ ಸಂಸ್ಕಾರ ನಾಳೆ ಮೈಸೂರಿನಲ್ಲಿ ನಡೆಯಲಿದ್ದು, ಸಕಲ ಸರಕಾರಿ ಗೌರವ ನೀಡಲು ರಾಜ್ಯ ಸರಕಾರ ಆದೇಶಿಸಿದೆ.

*******

ಮಂಗಳೂರಿನ ಸಮಗ್ರ ಅಭಿವೃದ್ಧಿಗೆ ರಾಜ್ಯ ಸರ್ಕಾರ ಅಗತ್ಯ ನೆರವು ಒದಗಿಸಲಿದೆ ಎಂದು ಗ್ರಾಮೀಣಾಭಿವೃದ್ಧಿ ಸಚಿವ ಪ್ರಿಯಾಂಕ ಖರ್ಗೆ ತಿಳಿಸಿದ್ದಾರೆ. ಬಿಯಾಂಡ್ ಬೆಂಗಳೂರಿನ ಭಾಗವಾಗಿ ಮಂಗಳೂರಿನಲ್ಲಿ ನಡೆದ ಮಂಗಳೂರು ಟೆಕ್ನೋವಾಂಜ್ಞಾ ಐದನೇ ಆವೃತ್ತಿಯ ಕಾರ್ಯಕ್ರಮದಲ್ಲಿ ಪಾಲ್ಗೊಂಡು ಮಾತನಾಡಿದ ಅವರು, ರಾಜ್ಯದಲ್ಲಿ ಬೆಂಗಳೂರು ಬಿಟ್ಟರೆ ಅತೀ ವೇಗವಾಗಿ ಬೆಳೆಯುತ್ತಿರುವ ನಗರವಾಗಿ ಮಂಗಳೂರು ಗುರುತಿಸಿಕೊಂಡಿದೆ. ಇಲ್ಲಿ ಹೂಡಿಕೆಗೆ ಸಾಕ ಷ್ಟು ಅವಕಾಶಗಳಿದ್ದು, ಹೂಡಿಕೆದಾರರು ಮುಂದೆ ಬರಬೇಕು. ನಗರದ ಅಭಿವೃದ್ಧಿಗೆ ಕೇಂದ್ರ ಸರ್ಕಾರದ ನೆರವು ಕೂಡ ಅಗತ್ಯವಿದ್ದು, ಜನಪ್ರತಿನಿಧಿಗಳು ಒಂದಾಗಿ ಇಚ್ಛಾಶಕ್ತಿಯಿಂದ ಕೆಲಸ ಮಾಡಿದರೆ ಈ ಭಾಗದಲ್ಲಿ ಮಹತ್ತರವಾದ ಬದಲಾವಣೆ ಕಾಣಲು ಸಾಧ್ಯ ಎಂದು ಹೇಳಿದರು.

*******

ಬೆಳಗಾವಿ ಜಿಲ್ಲಾ ಪಂಚಾಯತಿ ಮುಖ್ಯ ಕಾರ್ಯನಿರ್ವಹಣಾಧಿಕಾರಿ ರಾಹುಲ್ ಶಿಂಧೆ ನಿನ್ನೆ ನಗರದ ಜಿಲ್ಲಾ ಔ ಷಧ ಉಗ್ರಾಣಕ್ಕೆ ದಿಢೀರ್ ಭೇಟಿ ನೀಡಿ, ಪರಿಶೀಲಿಸಿದರು. ಜಿಲ್ಲೆಯ ವಿವಿಧ ಆರೋಗ್ಯ ಸಂಸ್ಥೆಗಳಲ್ಲಿ ರೋಗಿಗಳ ಸಂಖ್ಯೆ ಒಂದೇ ರೀತಿಯಾಗಿ ಇರದೇ ಇರುವುದರಿಂದ, ರೋಗಿಗಳ ಸಂಖ್ಯೆಗೆ ಅನುಗುಣವಾಗಿ ಹಾಗೂ ಆರೋಗ್ಯ ಸಂಸ್ಥೆಗಳ ಅವಶ್ಯಕತೆಗನುಗುಣವಾಗಿ ಔ ಷಧಿಗಳನ್ನು ವಿತರಿಸಲು ಉಗ್ರಾಣದ ಪ್ರಭಾರಧಾರಕರಿಗೆ ಸೂಚಿಸಿದ ಅವರು, ಔ ಷಧಗಳು ಅವಧಿ

ಮೀರದಂತೆ ನಿಗಾವಹಿಸುವುದು ಹಾಗೂ ಅವಧಿ ಮೀರಿದ ಔ ಧಗಳನ್ನು ವೈಜ್ಞಾನಿಕವಾಗಿ ವಿಲೇವಾರಿ ಮಾಡಲು ಕ್ರಮ ವಹಿಸುವಂತೆ ನಿರ್ದೇಶನ ನೀಡಿದರು.

*******

ಈಗ ಪ್ರಕಟಣೆ.. ನಂತರ ಪ್ರದೇಶ ಸಮಾಚಾರ ಮುಂದುವರಿಯುವುದು..

ಪ್ರಕಟಣೆ

ಪ್ರದೇಶ ಸಮಾಚಾರ ಕೇಳುತ್ತಿದ್ದೀರಿ..

*******

ಸೇವಾ ಮತ್ತು ಸುಶಾಸನ ಧ್ಯೇಯದೊಂದಿಗೆ, ಸಾರ್ವಜನಿಕ ಸೇವೆ ಮತ್ತು ಉತ್ತಮ ಆಡಳಿತದ ಸಂಕಲ್ಪ ಹೊಂದಿ, ಪ್ರಧಾನಮಂತ್ರಿ ನರೇಂದ್ರ ಮೋದಿ ನೇತೃತ್ವದ ಕೇಂದ್ರ ಸರ್ಕಾರ, ಕಳೆದ 11 ವರ್ಷಗಳಿಂದ, ಪರಿವರ್ತನೆ ಮತ್ತು ಪ್ರಗತಿ ಸಾಧಿಸಲು, ಅವಿಶ್ರಾಂತವಾಗಿ ಶ್ರಮಿಸುತ್ತಿದೆ. ರಕ್ಷಣಾ ವಲಯದ ನಾವಿನ್ಯತೆಗೆ, ಐ.ಡಿ.ಇ.ಎಕ್ಸ್. ಉಪಕ್ರಮವನ್ನು 2018 ರ ಏಪ್ರಿಲ್‌ನಲ್ಲಿ ಕೇಂದ್ರ ಸರ್ಕಾರ ಪ್ರಾರಂಭಿಸಿತ್ತು. ಸಂಶೋಧನೆ ಮತ್ತು ಅಭಿವೃದ್ಧಿ ಸಂಸ್ಥೆಗಳು, ಶೈಕ್ಷಣಿಕ ಸಂಸ್ಥೆಗಳು, ಕೈಗಾರಿಕೆಗಳು, ಸ್ಟಾರ್ಟ್‌ಅಪ್‌ಗಳು ಮತ್ತು ವಯಕ್ತಿಕ ನಾವಿನ್ಯಕಾರರನ್ನು ತೊಡಗಿಸಿಕೊಂಡು, ರಕ್ಷಣಾ ಕ್ಷೇತ್ರದಲ್ಲಿ ತಂತ್ರಜ್ಞಾನ ಅಭಿವೃದ್ಧಿ ಉತ್ತೇಜಿಸುವ ಗುರಿಯನ್ನು ಈ ಯೋಜನೆ ಹೊಂದಿದೆ. ಮಹಾಬಲಿಪುರಂನಲ್ಲಿ, ಡೆಫ್‌ಎಕ್ಸ್‌ಪೋ ಉದ್ಘಾಟಿಸಿ ಮತ್ತು ಐ.ಡಿ.ಇ.ಎಕ್ಸ್. ಗೆ ಚಾಲನೆ ನೀಡಿ ಮಾತನಾಡಿದ, ಪ್ರಧಾನಮಂತ್ರಿ ನರೇಂದ್ರ ಮೋದಿ, ತಂತ್ರಜ್ಞಾನ, ನಾವಿನ್ಯತೆ, ಸಂಶೋಧನೆ ಮತ್ತು ಅಭಿವೃದ್ಧಿಗೆ, ತಮ್ಮ ಸರ್ಕಾರ ಆದ್ಯತೆ ನೀಡಿದೆ, ಎಂದರು.

ಧ್ವನಿ –ಪ್ರಧಾನಮಂತ್ರಿ ನರೇಂದ್ರ ಮೋದಿ –22 ಸೆಕೆಂದುಗಳು

*******

ಈ ತಿಂಗಳ 17 ರಿಂದ ಆರಂಭಗೊಂಡಿರುವ ರಾಷ್ಟ್ರೀಯ ಪೋ ಣ್ ಮಾಸಾಚರಣೆ ರಾಜ್ಯಾದ್ಯಂತ ಚಾಲ್ತಿಯಲ್ಲಿದ್ದು, ಗರ್ಭಿಣಿಯರು, ಬಾಣಂತಿಯರು ಸೇರಿದಂತೆ ಮಕ್ಕಳಿಗೆ ಅಗತ್ಯವಾದ ಪೌಷ್ಟಿಕ ಆಹಾರ ಕ್ರಮಗಳ ಬಗ್ಗೆ ಜಾಗೃತಿ ಕಾರ್ಯಕ್ರಮಗಳನ್ನು ಆಯೋಜಿಸಲಾಗುತ್ತಿದೆ. ಧಾರವಾಡ ಜಿಲ್ಲೆಯಲ್ಲಿ ಪೋ ಣ್ ಮಾಸಾಚರಣೆ ಆಯೋಜನೆಗೊಂಡಿದ್ದು, ಜಾಗೃತಿ ಸೇರಿದಂಥೆ ಹಲವು ಕಾರ್ಯ ಚಟುವಟಿಕೆಗಳನ್ನು ಹಮ್ಮಿಕೊಳ್ಳಲಾಗುತ್ತಿದೆ ಗರ್ಭಿಣಿಯರು, ಬಾಣಂತಿಯರು ಶೈಶವಾವಸ್ಥೆ ಮಕ್ಕಳ ಅಪೌಷ್ಟಿಕತೆ ನಿವಾರಿಸಿ, ಆರೋಗ್ಯ ಸುಧಾರಣೆಗೆ ಅನುವು ಮಾಡಿಕೊಡುವ ಉದ್ದೇಶದಿಂದ ಜಾಗೃತಿ ಮೂಡಿಸಲಾಗುತ್ತಿದೆ ಎಂದು ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ ಉಪ ನಿರ್ದೇಶಕಿ ಡಾ.ಹೆಚ್.ಹೆಚ್ ಕುಕನೂರ ತಿಳಿಸಿದ್ದಾರೆ.

*******

ಬೆಂಗಳೂರು ಗ್ರಾಮಾಂತರ ಜಿಲ್ಲೆಯ ದೊಡ್ಡಬಳ್ಳಾಪುರದಲ್ಲಿ ತಾಲ್ಲೂಕು ಮಟ್ಟದ ಪೋ ಣ್ ಮಾಸಾಚರಣೆ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿತ್ತು. ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಶಾಸಕ ಧೀರಜ್ ಮುನಿರಾಜು, ಮಹಿಳೆಯರು ಪೌಷ್ಟಿಕಾಂಶಯುಕ್ತ ಆಹಾರ ಸೇವನೆ ಮಾಡಿ ತಮ್ಮ ಆರೋಗ್ಯ ಕಾಪಾಡಿಕೊಂಡರೆ ಮಕ್ಕಳೂ ಸಹ ಆರೋಗ್ಯವಾಗಿರುತ್ತಾರೆ. ನಮ್ಮ

ದೇಶದಲ್ಲಿನ ಶಿಶುಮರಣ, ತಾಯಿಯಂದಿರ ಮರಣ, ಅಪೌಷ್ಟಿಕತೆ ಹೋಗಲಾಡಿಸಲು ಕೇಂದ್ರ ಸರ್ಕಾರ ಹಲವು ಯೋಜನೆಗಳನ್ನು ರೂಪಿಸಿ, ಅನುಷ್ಠಾನಗೊಳಿಸುತ್ತಿದೆ ಎಂದರು.

*******

ಗದಗ ಜಿಲ್ಲಾ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ವತಿಯಿಂದ ನಗರದ ವೀರಭದ್ರೇಶ್ವರ ಸಮುದಾಯ ಭವನದಲ್ಲಿ ಪೋ ´ಣ ಮಾಸಾಚರಣೆ ಕಾರ್ಯಕ್ರಮ ಆಯೋಜಿಸಲಾಗಿತ್ತು. ಕಾರ್ಯಕ್ರಮ ನಿರೂಪಣಾಧಿಕಾರಿ ರಾಧಾ ಮಣ್ಣೂರ ಕಾರ್ಯಕ್ರಮ ಉದ್ಘಾಟಿಸಿದರು. ಬೊಜ್ಜುತನ ನಿವಾರಣೆ, ತಾಯಿಯ ಹೆಸರಿನಲ್ಲಿ ಒಂದು ಗಿಡ ನೆಡುವುದು, ಚಿಕ್ಕ ಮಕ್ಕಳ ಆಹಾರ ಅಭ್ಯಾಸಗಳು ಸೇರಿದಂತೆ ಹಲವು ವಿಷಯಗಳ ಕುರಿತು ಮಾಹಿತಿ ನೀಡಿದರು.

*******

ಸ್ವಚ್ಛತಾ ಹೀ ಸೇವಾ ಆಂದೋಲನದ ಪ್ರಯುಕ್ತ  ಮಂಡ್ಯದಲ್ಲಿ ನಿನ್ನೆ ಬೃಹತ್ ಸೈಕಲ್ ಜಾಥಾ ಆಯೋಜಿಸಲಾಗಿತ್ತು. ಜಿಲ್ಲಾಧಿಕಾರಿ ಕುಮಾರ, ಜಿಲ್ಲಾ ಪಂಚಾಯ್ತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ನಂದಿನಿ ಜಾಥಾಕ್ಕೆ ಚಾಲನೆ ನೀಡಿದರು. ಮಂಡ್ಯ ಜಿಲ್ಲಾ ಪಂಚಾಯಿತಿ ಕಚೇರಿಯಿಂದ ಸಾತನೂರು ಗ್ರಾಮ ಪಂಚಾಯಿತಿ ವ್ಯಾಪ್ತಿಯ ಕೊಮ್ಮೇರಳ್ಳಿ ನರಸಿಂಹ ಸ್ವಾಮಿ ಬೆಟ್ಟದವರಿಗೆ ಜಾಥಾ ನಡೆಯಿತು.

*******

ಕೊನೆಯಲ್ಲಿ ಮತ್ತೊಮ್ಮೆ ಮುಖ್ಯಾಂಶಗಳು

- ಆಧುನಿಕ ಕನ್ನಡ ಸಾಹಿತ್ಯ ಲೋಕದ ಜನಪ್ರಿಯ ಕಾದಂಬರಿಕಾರ ಡಾ.ಎಸ್.ಎಲ್ ಭೈರಪ್ಪ ನಿಧನ: ಗಣ್ಯರಿಂದ ಕಂಬನಿ.
- ರವೀಂದ್ರ ಕಲಾಕ್ಷೇತ್ರ ಆವರಣದಲ್ಲಿ ಇಂದು ಅಂತಿಮ ದರ್ಶನಕ್ಕೆ ಅವಕಾಶ: ಸಕಲ ಸರ್ಕಾರಿ ಗೌರವಗಳೊಂದಿಗೆ ನಾಳೆ ಮೈಸೂರಿನಲ್ಲಿ ಅಂತಿಮ ಸಂಸ್ಕಾರ.
- ಮಂಗಳೂರಿನ ಸಮಗ್ರ ಅಭಿವೃದ್ಧಿಗೆ ರಾಜ್ಯ ಸರ್ಕಾರದಿಂದ ಅಗತ್ಯ ನೆರವು– ಗ್ರಾಮೀಣಾಭಿವೃದ್ಧಿ ಸಚಿವ ಪ್ರಿಯಾಂಕ ಖರ್ಗೆ ಭರವಸೆ.
- ರಾಜ್ಯದಲ್ಲಿ ಮುಂದುವರಿದ ರಾಷ್ಟ್ರೀಯ ಪೋ ´ಣ್ ಮಾಸಾಚರಣೆ–ಪೌಷ್ಟಿಕ ಆಹಾರ ಕ್ರಮಗಳ ಬಗ್ಗೆ ಜಾಗೃತಿ ಕಾರ್ಯಕ್ರಮಗಳು.
- ಇಲ್ಲಿಗೆ ಪ್ರದೇಶ ಸಮಾಚಾರ ಮುಕ್ತಾಯವಾಯಿತು

ನಮ್ಮ ಮುಂದಿನ ರಾಷ್ಟ್ರೀಯ ವಾರ್ತಾ ಪ್ರಸಾರ ಈ ಬೆಳಿಗ್ಗೆ 7 ಗಂಟೆ 35 ನಿಮಿಷಕ್ಕೆ

********